ತುಮಕೂರು ಜಿಲ್ಲೆಯಲ್ಲಿ ರೈತರ ಬೆಳೆ ವಿಮೆ ಯೋಜನೆ

4676 (5398) : ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ತುರುವೇಕೆರೆ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ಈ ವರ್ಷ ಬೆಳೆ ವಿಮೆ ಯೋಜನೆ ಅಡಿಯಲ್ಲಿ ಎಷ್ಟು ರೈತರು ಅರ್ಜಿ ಸಲ್ಲಿಸಿದ್ದಾರೆ (ತಾಲ್ಲೂಕುವಾರು ವಿವರ ನೀಡುವುದು)

ಆ) ಸರಿಯಾದ ಪ್ರಚಾರ ಕೊಡದೇ ರೈತರಿಗೆ ಅನಾನುಕೂಲವಾಗಿ ಇನ್ನೂ ಸಾವಿರಾರು ರೈತರು ವಿಮೆ ಮಾಡಿಸಿಲ್ಲದಿರುವುದು ನಿಜವೆ; ಅದಕ್ಕೆ ಕಾರಣವೇನು?

ಇ) ತಾಲ್ಲೂಕು ಹೋಬಳಿ ಹಾಗೂ ಪಂಚಯತಿ ಮಟ್ಟದಲ್ಲಿ ಸರಿಯಾದ ವ್ಯವಸ್ಥೆ ಮೂಲಕ ಪ್ರಚಾರ ಮಾಡಿ ರೈತರಿಗೆ ತಿಳಿಸಲಾಗಿದೆಯೇ?

ಈ) ಇದರಲ್ಲಿ ಭ್ರಷ್ಟಾಚಾರ ನಡೆದಿರುವ ಪ್ರಕರಣ ಏನಾದರೂ ಇದೆಯೇ?

ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು)

ಅ) ತುಮಕೂರು ಜಿಲ್ಲೆಯಲ್ಲಿ 2002–03ನೇ ಸಾಲಿನಲ್ಲಿ ಒಟ್ಟು 24,744 ರೈತರು ಬೆಳೆ ವಿಮಾ ಯೋಜನೆಯಡಿಯಲ್ಲಿ ಪಾಲ್ಗೊಂಡಿರುತ್ತಾರೆ. ತಾಲ್ಲೂಕುವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಇಲ್ಲ.

ಇ) ಹೌದು. ಬೆಳೆ ವಿಮಾ ಯೋಜನೆಯ ಬಗ್ಗೆ ಇಲಾಖಾ ಕರ ಪತ್ರ ಪೋಸ್ಟರ್, ದಿನಪತ್ರಿಕೆಗಳ ಮೂಲಕ ಹಾಗೂ ಇತರೆ ಸುದ್ದಿ ಮಾಧ್ಯಮಗಳ ಮುಖಾಂತರ ತಾಲ್ಲೂಕು ಹೋಬಳಿ ಮತ್ತು ಪಂಚಾಯತಿ ಮಟ್ಟದಲ್ಲಿ ವ್ಯಾಪಕ ಪ್ರಚಾರ ಮಾಡಲಾಗಿದೆ. ಅಲ್ಲದೆ, ಹೋಬಳಿ ಮಟ್ಟದಲ್ಲಿರುವ ಇಲಾಖೆಯ ರೈತ ಸಂಪರ್ಕ ಕೇಂದ್ರಗಳ ಮೂಲಕ ಯೋಜನೆಯ ಬಗ್ಗೆ ಅಗತ್ಯ ಮಾಹಿತಿ ನೀಡಲಾಗಿದೆ.

ಈ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯಡಿಯಲ್ಲಿ ಯಾವುದೇ ಭ್ರಷ್ಟಾಚಾರದ ಪ್ರಕರಣ ವರದಿಯಾಗಿರುವುದಿಲ್ಲ.

ತುರುವೇಕೆರೆ ತಾಲ್ಲೂಕು ಮಾದೀಹಳ್ಳಿ ಫಾರಂ ಅಭಿವೃದ್ಧಿ

4677 (5399) : ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ತುರುವೇಕೆರೆ) ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ಮಾದಿಹಳ್ಳಿ ಫಾರಂನ ಅಭಿವೃದ್ಧಿ ಕುಂಠಿತವಾಗಿರುವುದು ನಿಜವೇ;

ಆ) ಫಾರಂನಲ್ಲಿ ಬೆಳೆದಿರುವ ಅನೇಕ ತೋಟಗಾರಿಕೆ ಸಸಿಗಳಿಗೆ ನೀರಿಲ್ಲದೆ ಒಣಗುತ್ತಿರುವುದು ನಿಜವೇ;

ಇ) ಹೊಸ ಬೋರ್‌ವೆಲ್ ಕೊರೆದು ನೀರಿನ ವ್ಯವಸ್ಥೆ ಮಾಡದಿರಲು ಕಾರಣವೇನು; ನಿರ್ಲಕ್ಷ ಮಾಡಿ ಫಾರಂ ಈ ರೀತಿ ಆಗಲು ಕಾರಣರಾರು;

ಈ) ತಕ್ಷಣ ಹೊಸ ಬೋರ್‌ವೆಲ್‌ಗಳನ್ನು ಕೊರೆದು ನೀರು ಕೊಡಲಾಗುವುದೇ;

ಉ) ಯಾವಾಗ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು;

ಶ್ರೀ ಎಂ. ಶಿವಣ್ಣ (ತೋಟಗಾರಿಕೆ ಸಚಿವರು)

ಅ) ಇಲ್ಲ.

ಅನುದಾನ ಲಭ್ಯತೆಗೆ ಅನುಗುಣವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ.

ಅ) ಇತ್ತೀಚಿನ ದಿನಗಳಲ್ಲಿ ಈ ಜಿಲ್ಲೆಯಲ್ಲಿ ಮಳೆಯ ಪ್ರಮಾಣ ತುಂಬಾ ಕಡಿಮೆಯಾಗಿದ್ದು, ಒಂದು ಕೊಳವೆ ಬಾವಿಯಲ್ಲಿ ನೀರು ಬತ್ತಿಹೋಗಿರುತ್ತದೆ. ಆದಾಗ್ಯೂ ಕ್ಷೇತ್ರದಲ್ಲಿ ಯಾವುದೇ ಮರಗಿಡಗಳು ಒಣಗಿರುವುದಿಲ್ಲ.

ಇ) ಈ ಕ್ಷೇತ್ರದಲ್ಲಿ ಒಟ್ಟಾರೆ ಎರಡು ಕೊಳವೆ ಬಾವಿಗಳಿದ್ದು. ಒಂದು ಕೊಳವೆ ಬಾವಿ ಇತ್ತೀಚಿನ ದಿನಗಳಲ್ಲಿ ಮಳೆ ತುಂಬಾ ಕಡಿಮೆಯಾಗಿರುವ ಕಾರಣ ಬತ್ತಿಹೋಗಿರುತ್ತದೆ. ಉಳಿದ ಒಂದು ಕೊಳವೆ ಬಾವಿ ನೀರನ್ನು ಉಪಯೋಗಿಸಿಕೊಂಡು ಕ್ಷೇತ್ತದಲ್ಲಿರುವ ಗಿಡ ಮರಗಳಿಗೆ ಹಾಗೂ ಸಸ್ಯಾಭಿವೃದ್ಧಿಗೆ ಬಳಸಲಾಗುತ್ತಿದೆ. 2000–2001 ನೇ ಸಾಲಿನಲ್ಲಿ ಹೊಸದಾಗಿ ಒಂದು ಕೊಳವೆ ಬಾವಿಯನ್ನು ಕೊರೆಸಿದ್ದು. ಇದಕ್ಕೆ ಪಂಪ್ ಅಳವಡಿಸಲು ಪ್ರಯತ್ನಿಸಿದಾಗ ಬೆಣಚುಕಲ್ಲುಗಳು ಅಡ್ಡ ಬಂದು ಅಳವಡಿಸಲು ಸಾಧ್ಯವಾಗಲಿಲ್ಲ. ಆದಾಗ್ಯೂ ಈ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿರುವುದಿಲ್ಲ.

ಮೇಲಿನ ವಿವರಣೆಯಿಂದಾಗಿ ನಿರ್ಲಕ್ಷ್ಯ ಮಾಡಿ ಫಾರಂ ಈ ರೀತಿ ಆಗಲೂ ಕಾರಣರಾರೆನ್ನುವ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಪ್ರಸ್ತುತ ಸಾಲಿನಲ್ಲಿ ಈ ಕೊಳವೆಬಾವಿಯನ್ನು ರೀಡ್ರಿಲ್ ಮಾಡಿಸಿ ಪಂಪ್ ಅಳವಡಿಸಿ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಕಾರ್ಯಕ್ರಮ ಕೈಗೊಳ್ಳಲಾಗುತ್ತದೆ.

ಉ) ಪ್ರಸ್ತುತ ಸಾಲಿನಲ್ಲಿ ರೀಡ್ರಿಲ್ ಮಾಡಿಸಲು ಕ್ರಮ ಕೈಗೊಳ್ಳಲಾಗುವುದು.

ತುರುವೇಕೆರೆ ತಾಲ್ಲೂಕಿನಲ್ಲಿ ಕೈಗೊಂಡ ಏತ ನೀರಾವರಿ ಯೋಜನೆಗಳು

4678 (5400) :ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ತುರುವೇಕೆರೆ) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೆಕೆರೆ ತಾಲ್ಲೂಕಿನ ದಬ್ಬೇಗಟ್ಟ ಹಾಗೂ ಕಸಬಾ ಹೋಬಳಿಯ 2 ಏತ ನೀರಾವರಿ ಯೋಜನೆಗಳು ಯಾವ ಹಂತದಲ್ಲಿದೆ;

ಆ) ಕಳೆದ ಎರಡು ವರ್ಷಗಳಿಂದ ಈ ಯೋಜನೆಗೆ ಈ ಭಾಗದ ಜನರ ಬೇಡಿಕೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ತಕ್ಷಣ ಈ ಯೋಜನೆಯನ್ನು ಕಾರ್ಯಗತ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು;

ಈ) ಯಾವಾಗ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಎಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು)

ಅ) ತುವೇಕೆರೆ ತಾಲ್ಲೂಕಿನ ದಬ್ಬೇಗಟ್ಟ ಹೋಬಳಿಯ ಏತ ನೀರಾವರಿ ಯೋಜನೆಗಳ ಬಗ್ಗೆ ಪರಿಶೀಲಿಸಲಾಗುವುದು.

ಆ) ಪರಿಶೀಲಿಸಿ ಕ್ರಮ ಜರುಗಿಸಲಾಗುವುದು.

ಇ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

ಈ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

ಅಗರಬತ್ತಿ ವರ್ಕ್ಸ್ ಅದರ್ಸ್ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ

4680 (5193) : ಡಾ: ನಾಗಪ್ಪ ವೈ (ಹರಹರ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?